ಕಾಲೇಜನ್ನು ಮಂಜೂರು ಮಾಡಲಾಗಿದೆ. ಕಾರವಾರ ನಗರ ಮೈಸೂರು ನಗರಗಳಿಗೆ ತಲಾ ಒಂದು ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲಾಗಿದೆ. ಚಿತ್ರದುರ್ಗ ನಗರದಲ್ಲಿ ಇರುವ ಬಾಲಕರ ಹಾಗೂ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ತಲಾ 10 ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಭದ್ರಾವತಿ ನಗರದಲ್ಲಿ ಸಾಕಷ್ಟು ಪದವಿ ಪೂರ್ವ ಕಾಲೇಜುಗಳಿದ್ದು ಹೆಚ್ಚುವರಿ ಪದವಿ ಪೂರ್ವ ಕಾಲೇಜುಗಳ ಅವಶ್ಯಕತೆ ಇರುವುದಿಲ್ಲ.

ರಾಜ್ಯದಲ್ಲಿ ಸ್ವಚ್ಛ ಗ್ರಾಮ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1066(೧೩೯೯)

ಸದಸ್ಯರ ಹೆಸರು: ಶ್ರೀ ಬಚ್ಚೇಗೌಡ.ಬಿ.ಎನ್(ಹೊಸಕೋಟೆ)

ಉತ್ತರಿಸುವ ಸಚಿವರು: ಶ್ರೀ ಎಂ.ವೈ.ಘೋರ್ಪಡೆ(ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು)

ಪ್ರಶ್ನೆ

ಅ. ರಾಜ್ಯದಲ್ಲಿ ಎಷ್ಟು ಗ್ರಾಮಗಳನ್ನು ಸ್ವಚ್ಛ ಗ್ರಾಮ ಯೋಜನೆಯಡಿಯಲ್ಲಿ ತೆಗೆದುಕೊಳ್ಳಲಾಗಿದೆ?

ಆ. ಸ್ವಚ್ಛ ಗ್ರಾಮ ಯೋಜನೆಯಡಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಗುತ್ತಿಗೆದಾರರಿಗೆ ನೀಡಲಾಗಿದೆಯೇ; ಇದಕ್ಕೆ ನಿಯಮಾವಳಿಗಳನ್ನು ಅಳವಡಿಸಲಾಗಿದೆಯೇ?

ಇ. ಈ ಕಾಮಗಾರಿಗಳಿಗೆ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಹಣವೆಷ್ಟು?

ಈ. ಈ ಕಾಮಗಾರಿಗಳು ನಡೆಯದೇ ಇರಲು ಕಾರಣಗಳೇನು?

ಉತ್ತರ

ಅ. ೧೨೯೬

ಆ. ಸ್ವಚ್ಛ ಗ್ರಾಮ ಯೋಜನೆಯಡಿ ಕಾಮಗಾರಿಗಳ ಅನುಷ್ಠಾನವನ್ನು ಕರ್ನಾಟಕ ಭೂಸೇನಾ ನಿಗಮ : ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ : ನಿರ್ಮಿತಿ ಕೇಂದ್ರದ ಮುಖಾಂತರ ಕೈಗೊಳ್ಳಬಹುದಾಗಿದೆ. ಕಾಮಗಾರಿಗಳ ಅನುಷ್ಠಾನವನ್ನು

ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗಕ್ಕೆ ವಹಿಸಿದಲ್ಲಿ, ಕಾಮಗಾರಿಗಳನ್ನು ಟೆಂಡರ್ ಮೂಲಕ ನಿರ್ವಹಿಸಬೇಕಾಗುತ್ತದೆ.

ಇ. ಹುಡ್ಕೋದಿಂದ ಪಡೆದುಕೊಂಡ ರೂ.೬೦.೦೦ ಕೋಟಿಗಳನ್ನು ಮತ್ತು ಸರ್ಕಾರದ ಪಾಲಿನ ರೂ.೧೦.೦೦ ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಇದಲ್ಲದೆ, ಸಮುದಾಯ ವಂತಿಗೆಯ ರೂ.೧೧.೨೫ ಕೋಟಿ ಜಿಲ್ಲೆಗಳಲ್ಲಿ ಲಭ್ಯವಿರುತ್ತದೆ.

ಈ. ಈಗಾಗಲೇ ೩೫೯ ಗ್ರಾಮಗಳಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ. ಕಾಮಗಾರಿಗಳ ಅನುಷ್ಠಾನದಲ್ಲಿ ಕೆಲವು ಸಮಸ್ಯೆಗಳು ಬಂದಿದ್ದು, ಅವನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗಿದೆ. ಇನ್ನುಳಿದ ಗ್ರಾಮಗಳಲ್ಲಿ ಶೀಘ್ರವಾಗಿ ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಸ್ವಚ್ಛ ಗ್ರಾಮ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1067(೧೪೧೬)

ಸದಸ್ಯರ ಹೆಸರು: ಶ್ರೀ ಬನ್ನಿಕೋಡ್.ಬಿ.ಹೆಚ್(ಹಿರೇಕೆರೂರು)

ಉತ್ತರಿಸುವ ಸಚಿವರು: ಶ್ರೀ ಎಂ.ವೈ.ಘೋರ್ಪಡೆ(ಗ್ರಾಮೀಣಾಭಿವೃದ್ಧಿ ಸಚಿವರು)

ಪ್ರಶ್ನೆ

ಅ. ರಾಜ್ಯದಲ್ಲಿ ಸ್ವಚ್ಛ ಗ್ರಾಮ ಯೋಜನೆಗೆ ಸೇರ್ಪಡೆಯಾದ ಗ್ರಾಮ ಸಂಖ್ಯೆ ಎಷ್ಟು? (ಜಿಲ್ಲಾ ಹಾಗೂ ತಾಲ್ಲೂಕುವಾರು ವಿವರ ನೀಡುವುದು)

ಆ. ಇದಕ್ಕೆ ನಿಗದಿಪಡಿಸಿದ ಅಂದಾಜು ಮೊತ್ತವೆಷ್ಟು? ಆದ ವೆಚ್ಚವೆಷ್ಟು?

ಇ. ೨೦೦೧-೦೨ನೇ ಸಾಲಿನಲ್ಲಿ ಈ ಯೋಜನೆಯನ್ನು ಮುಂದುವರೆಸಲಾಗಿದೆಯೇ ಹಾಗಿದ್ದಲ್ಲಿ ಜಿಲ್ಲಾ ಹಾಗೂ ತಾಲ್ಲೂಕುವಾರು ವಿವರ ನೀಡುವುದು?

ಈ. ಸ್ವಚ್ಛ ಗ್ರಾಮ ಯೋಜನೆಯನ್ನು ಮುಂದುವರೆಸಲು ಸರ್ಕಾರದ ನೀತಿ ಹಾಗೂ ಕ್ರಮಗಳೇನು?

ಉತ್ತರ

ಅ. ವಿವರಗಳನ್ನು ಅನುಬಂಧ-೧೮ರಲ್ಲಿ ನೀಡಲಾಗಿದೆ.